ಅ) ಭಟ್ಕಳ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಹೊನ್ನಾವರ ತಾಲ್ಲೂಕಿನ ಜೂನಿಯರ್ ಕಾಲೇಜುಗಳಾದ ಮಂಕಿ, ಇಡಗುಂಚಿ ಹಾಗೂ ಅಳ್ಳಂಕಿಯಲ್ಲಿ ಕಟ್ಟಡ, ಫರ್ನಿಚರ್ ಹಾಗೂ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇವುಗಳನ್ನು ಈಡೇರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಪ್ರೊ: ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಬಂದಿದೆ

ಆ) ಹಂತಹಂತವಾಗಿ ಆದ್ಯತೆ ಮೇರೆಗೆ ವಿದ್ಯಾರ್ಥಿಗಳ ಸಂಖ್ಯೆಯನ್ನು ಗಮನದಲ್ಲಿಟ್ಟು ಕೊಂಡು ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಕ್ರಮಕೈಗೊಳ್ಳಲಾಗುತ್ತಿದೆ. ಹಾಗೆಯೇ ಫರ್ನಿಚರ್‌ನ್ನು ಆದ್ಯತೆ ಮೇರೆಗೆ ಒದಗಿಸಲಾಗುತ್ತಿದೆ. 2000–01ನೇ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಮಂಕಿ ಇಲ್ಲಿಗೆ 10 ಡೆಸ್ಕ್‌ಗಳನ್ನು ಒದಗಿಸಲಾಗಿದೆ. ಸರ್ಕಾರಿ ಪದವಿ ಪೂರ್ವ ಕಾಲೇಜು, ಮಂಕಿ ಇಲ್ಲಿ ಮೂರು ಉಪನ್ಯಾಸಕರ ಹುದ್ದೆ, ಸರ್ಕಾರಿ ಪದವಿ ಪೂರ್ವ ಕಾಲೇಜು ಅಳ್ಳಂಕಿ ಇಲ್ಲಿ ಪ್ರಾಚಾರ್ಯರ ಹುದ್ದೆ ಮತ್ತು ಮೂರು ಉಪನ್ಯಾಸಕರ ಹುದ್ದೆಗಳು ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜು ಇಡಗುಂಜಿ, ಇಲ್ಲಿ ಮೂರು ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತದೆ. ಈ ಉಪನ್ಯಾಸಕರ ಹುದ್ದೆಗಳಿಗೆ ಪಕ್ಕದ ಕಾಲೇಜುಗಳಿಂದ ಉಪನ್ಯಾಸಕರನ್ನು ನಿಯೋಜನೆ ಮೇರೆಗೆ ನೇಮಿಸಿ ಪಾಠಪ್ರವಚನಗಳಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗಿದೆ.

ಕೊಳ್ಳೇಗಾಲದ ಸಾರ್ವಜನಿಕ ಆಸ್ಪತ್ರೆಗೆ ಮೂಲಭೂತ ಸೌಕರ್ಯ

3574 (4071) ಶ್ರೀ ನಂಜುಂಡಸ್ವಾಮಿ, ಬಿ.ಎನ್. (ಕೊಳ್ಳೇಗಾಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೊಳ್ಳೇಗಾಲದ ಸಾರ್ವಜನಿಕ ಆಸ್ಪತ್ರೆಯಲ್ಲಿ ಮೂಲಭೂತ ಸೌಲಭ್ಯ ಹಾಗೂ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ಏನು ಕ್ರಮ ಕೈಗೊಂಡಿರುತ್ತದೆ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಕೊಳ್ಳೆಗಾಲ ಸಾರ್ವಜನಿಕ ಆಸ್ಪತ್ರೆಯ ವಿಸ್ತರಣೆ ಮತ್ತು ನವೀಕರಣ ಕಾಮಗಾರಿಯನ್ನು ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿ ಕೈಗೊಂಡಿದ್ದು ಎಲ್ಲಾ ಕಟ್ಟಡ ಕಾಮಗಾರಿಗಳನ್ನು ಪೂರ್ಣಗೊಳಿಸಿ ವೈದ್ಯಾಧಿಕಾರಿಗಳಿಗೆ ಹಸ್ತಾಂತರಿಸಲಾಗಿದೆ. ಈ ಆಸ್ಪತ್ರೆಗೆ ಅಗತ್ಯವಿರುವ ಸೌಲಭ್ಯಗಳನ್ನು ಇದೇ ಯೋಜನೆಯಡಿ ಒದಗಿಸಲಾಗಿದೆ.

ಎರಡು ತಜ್ಞ ವೈದ್ಯರ ಹುದ್ದೆಗಳು (ಅರವಳಿಕೆ ತಜ್ಞ : ಕಿವಿ ಮೂಗ ಗಂಟಲು ತಜ್ಞ) ಖಾಲಿ ಇರುತ್ತದೆ.

ಆ) ಖಾಲಿ ಇರುವ ಅರವಳಿಕೆ ತಜ್ಞ ಮತ್ತು ಕಿವಿ ಮೂಗ ಗಂಟಲು ತಜ್ಞ ವೈದ್ಯರನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಸರ್ಕಾರವು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ.

ಆನೇಕಲ್ ತಾಲ್ಲೂಕಿನ ಬೇಗೂರಿನಲ್ಲಿ ಆರೋಗ್ಯ ಕೇಂದ್ರ ಕಟ್ಟಡ ನಿರ್ಮಾಣ

3575 (4072) ಶ್ರೀ ನಾರಾಯಣಸ್ವಾಮಿ ಎ (ಆನೇಕಲ್) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?